# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1016 |
| ಉತ್ತರಿಸಬೇಕಾದ ಸಚಿವರು | : | ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24-02-2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಇಲ್ಲಿಯವರೆಗೆ ರೈತರು ಕೃಷಿಯಲ್ಲಿ ಮಾಡಿರುವ ಸಾಧನೆಯನ್ನು ಗುರುತಿಸಿ ರಾಜ್ಯ ಪ್ರಶಸ್ತಿ ಮತ್ತು ಸೂಪರ್ ಸ್ಟಾರ್ ರೈತ ಪ್ರಶಸ್ತಿಗಳನ್ನು ಪಡೆದುಕೊಂಡ ರೈತರಿಗೆ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆಯೇ; ಅಥವಾ ನೀಡಲು ಸರ್ಕಾರ ಆಲೋಚಿಸಿದೆಯೇ; | ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಶ್ರೀ ಎನ್. ಸಿ. ಪಟೇಲ್ ರವರಿಗೆ 2022ರ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗಿದೆ. |
| (ಆ) | ರೈತರಿಗೆ ಈ ಗೌರವ ಡಾಕ್ಟರೇಟ್ ನೀಡದಿದ್ದ ಪಕ್ಷದಲ್ಲಿ ರಾಜ್ಯದಲ್ಲಿನ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಡಾಕ್ಟರೇಟ್ ನೀಡುತ್ತಿರುವಂತೆ ಕೃಷಿಕ ರೈತರನ್ನು ಗುರುತಿಸಿ, ಗೌರವ ಡಾಕ್ಟರೇಟ್ ನೀಡಲು ಸರ್ಕಾರಕ್ಕಿರುವ ತೊಂದರೆಯಾದರು ಏನು; (ವಿವರ ನೀಡುವುದು) | ಬೆಂಗಳೂರು ಮತ್ತು ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಕೃಷಿ ಕ್ಷೇತ್ರದ ಸಾಧಕರಿಗೆ 2022 ರಿಂದ ನಿಯಮಾನುಸಾರ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ.<br><br>ರಾಜ್ಯದಲ್ಲಿನ ಕೃಷಿಕ ರೈತರನ್ನು ಗುರುತಿಸಿ ಹಾಗೂ ಅವರು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಪರಿಗಣಿಸಿ, ಅಂತಹ ಸಾಧಕರಿಗೆ ಗೌರವ ಡಾಕ್ಟರೇಟ್ ನೀಡುವ ಬಗ್ಗೆ ಅಗತ್ಯ ಸೂಚನೆಗಳನ್ನು ಮಾನ್ಯ ರಾಜ್ಯಪಾಲರ ಸಚಿವಾಲಯದ ದಿನಾಂಕ:18-02-2016ರ ಸುತ್ತೋಲೆಯನ್ವಯ ಕ್ರಮ ಕೈಗೊಳ್ಳಲು ರಾಜ್ಯದಲ್ಲಿರುವ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಿಗೆ ನೀಡಲಾಗಿದೆ. ಈಗಾಗಲೇ ಗೌರವ ಡಾಕ್ಟರೇಟ್ ಅನ್ನು ನೀಡಲು ಅಗತ್ಯ ಬದಲಾವಣೆಗಳನ್ನು ನಿಯಮಗಳಲ್ಲಿ ತರಲಾಗಿದೆ.<br><br>ಕೃಷಿಕರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬೆಂಗಳೂರು ಮತ್ತು ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮಟ್ಟದಲ್ಲಿ ಕೃಷಿ ಸಾಧಕರಿಗೆ ಮಾರ್ಗಸೂಚಿಗಳನ್ವಯ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ.<br><br>ಮುಂದಿನ ದಿನಗಳಲ್ಲಿ ಸೂಕ್ತ ಮಾರ್ಗಸೂಚಿ/ ನಿಯಮಾವಳಿಗಳನ್ನು ಉಳಿದ ವಿಶ್ವವಿದ್ಯಾಲಯಗಳಲ್ಲಿ ಅಳವಡಿಸಿಕೊಂಡು ಗೌರವ ಡಾಕ್ಟರೇಟ್ ನೀಡಲು ಕ್ರಮಕೈಗೊಳ್ಳಲಾಗುವುದು. |
| (ಇ) | ಕೃಷಿಕ ರೈತರನ್ನು ಪ್ರೋತ್ಸಾಹಿಸುವ ಸಲುವಾಗಿ ಕೃಷಿಯಲ್ಲಿ ವೈಜ್ಞಾನಿಕ ರೀತಿಯ ಆಧುನಿತ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಕೃಷಿ ಕ್ಷೇತ್ರದಲ್ಲಿ ಹೆಚ್ಚು ಹೆಚ್ಚಾಗಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರೈತರನ್ನು ಗೌರವ ಡಾಕ್ಟರೇಟ್ ನೀಡುವ ಬಗ್ಗೆ ಸರ್ಕಾರದ ನಿಲುವೇನು? | |

ಇ-ಸಂಖ್ಯೆ: AGRI/12/AUM/2023

(ಬಿ.ಸಿ. ಪಾಟೀಲ್)
ಕೃಷಿ ಸಚಿವರು